**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ/209ಯುಎನ್‌ಇ/2021(ಭಾ)

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 11.02.2022

**ಸುತ್ತೋಲೆ**

ಸರ್ಕಾರದ ಇದೇ ಸಮ ಸಂಖ್ಯೆಯ ದಿನಾಂಕ:08.02.2022 ರ ಸುತ್ತೋಲೆಯನ್ನು ಮುಂದುವರೆಸುತ್ತಾ, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮುಂಜಾಗ್ರತ ಕ್ರಮವಾಗಿ, ಫೆಬ್ರುವರಿ 2022 ರ **ದಿನಾಂಕ 12, 13 ರ ಭಾನುವಾರ ರಜಾ ದಿನ ಸಹಿತವಾಗಿ, 14, 15 ಮತ್ತು 16** ರವರೆಗೆ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳು ಹಾಗೂ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪದವಿ ಕಾಲೇಜುಗಳು, ಡಿಪ್ಲೋಮೊ ಕಾಲೇಜುಗಳ ವಿದ್ಯಾರ್ಥಿಗಳಿಗೆ ಮಾತ್ರ ರಜೆಯನ್ನು ಘೋಷಿಸಲಾಗಿದೆ.

ಮುಂದುವರೆದು, ಸದರಿ ದಿನಾಂಕಗಳಂದು ಪರೀಕ್ಷೆಗಳು ನಡೆಯುತ್ತಿದ್ದಲ್ಲಿ, ಯಥಾವತ್ತಾಗಿ ನಡೆಯಲಿವೆ ಹಾಗೂ ಆನ್ ಲೈನ್ ತರಗತಿಗಳ ಮೂಲಕ ವ್ಯಾಸಂಗ ಕ್ರಮವನ್ನು ನಡೆಸುವಂತೆ ಸೂಚಿಸಿದೆ.

Sheetal M Hiremath

**(ಶೀತಲ್ ಎಂ ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯಗಳು-1)

**ಇವರಿಗೆ,**

1. ಆಯುಕ್ತರು, ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ – ಇವರ ಮೂಲಕ ಸರ್ಕಾರಿ ಅನುದಾನಿತ / ಅನುದಾನ ರಹಿತ ಪದವಿ / ಡಿಪ್ಲೋಮೊ ಕಾಲೇಜುಗಳ ಪ್ರಾಂಶುಪಾಲರಿಗೆ.
2. ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರು – ಇವರ ಮೂಲಕ ಸಂಬಂಧಿಸಿದ ಸಂಯೋಜಿತ ಕಾಲೇಜುಗಳಿಗೆ.
3. ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ.
4. ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ಕಾಲೇಜುಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ.